**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.** **DW-3**

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ ಂಃ 16.10.2025

**ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ**

ನನಗೆ ವಾದಿ ಮತ್ತು ಪ್ರತಿವಾದಿಯ ಪರಿಚಯ ಇರುತ್ತದೆ. ಮಹಾದೇವಮ್ಮ ರವರ ಗಂಡನ ಹೆಸರು ನನಗೆ ಮರೆತು ಹೋಗಿರುತ್ತದೆ. 1ನೇ ವಾದಿಯ ಗಂಡನ ತಂದೆಯ ಹೆಸರು ಸಿದ್ದೇಗೌಡ ಇರುತ್ತದೆ ಎಂದರೆ ಸರಿ. ವಾದಿಯರು ಮಾದೇಗೌಡನ ಹುಂಡಿ ಗ್ರಾಮದಲ್ಲಿ ವಾಸವಾಗಿರುತ್ತಾರೆ ಎಂದರೆ ಸರಿ. ಪ್ರತಿವಾಯರು ಮಹಾದೇವಪುರ ಗ್ರಾಮದಲ್ಲಿ ವಾಸವಾಗಿರುತ್ತಾರೆ ಎಂದರೆ ಸರಿ. ನಮ್ಮ ಸಮಕ್ಷಮ ಆಗಿರುವ ವಿಭಾಗ ಪತ್ರವು ನೊಂದಣಿ ಆಗಿರುವುದಿಲ್ಲ. ಸದರಿ ವಿಭಾಗ ಪತ್ರವನ್ನು ನೋಂದಣಿ ಮಾಡಿಸಲು ತೊಂದರೆ ಇರಲಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇರಲಿಲ್ಲ ಎಂದು ನುಡಿಯುತ್ತಾರೆ. ವಿಭಾಗ ಪತ್ರಕ್ಕೆ ನೀವು ಸಹಿ ಮಾಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಮಾತುಕತೆ ಆಗಿದ್ದು ಯಾವುದೇ ವಿಭಾಗ ಆಗಿರುವುದಿಲ್ಲ ಎಂದು ನುಡಿಯುತ್ತಾರೆ.

ವಿಭಾಗ ಪತ್ರ ಆಗುವ ದಿನದಂದು ಹೆಣ್ಣು ಮಕ್ಕಳು ಅಲ್ಲಿ ಇರಲಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇದ್ದರು ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರೆದು ಹೆಣ್ಣು ಮಕ್ಕಳುಗಳು ಯಾವುದೇ ಭಾಗ ಬೇಡವೆಂದು ಹಾಗೂ ಎಲ್ಲಾ ಆಸ್ತಿಯನ್ನು ಗಂಡು ಮಕ್ಕಳಿಗೆ ನೀಡಿ ಎಂದು ನುಡಿಯುತ್ತಾರೆ. ಆ ರೀತಿ ಹೆಣ್ಣು ಮಕ್ಕಳುಗಳು ಹೇಳಿರುವುದಿಲ್ಲ ಎಂದರೆ ಸರಿಯಲ್ಲ. ಆ ದಿನ ಅವರುಗಳು ಅಲ್ಲಿಗೆ ಬಂದಿರುವುದಿಲ್ಲ ಎಂದರೆ ಸರಿಯಲ್ಲ. ನಾಗಮ್ಮರವರಿಗೆ ಅನುಕೂಲವಾಗಲಿ ಎಂದು ನಾನು ಸುಳ್ಳು ಸಾಕ್ಷ್ಯ ನಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಚನ್ನಮ್ಮ ರವರ ಮಗಳು ತೀರಿಕೊಂಡಾಗ ನಾವು ಪಂಚಾಯಿತಿ ಸೇರಿದ್ದೆವು ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಚನ್ನಮ್ಮರವರ ಮಗಳು ಸ್ವಾಭಾವಿಕವಾಗಿ ತೀರಿಕೊಂಡಿರುವುದಿಲ್ಲ, ಅದು ಆಕಸ್ಮಿಕ ಸಾವು ಎಂದರೆ ನನಗೆ ಗೊತ್ತಿರುವುದಿಲ್ಲ.

ನಿಮ್ಮ ಮುಖ್ಯ ವಿಚಾರಣೆಯಲ್ಲಿ ಇರುವ ವಿಚಾರಗಳ ಬಗ್ಗೆ ಮಾಹಿತಿ ಇರುತ್ತದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರೆದು ಸಹಿ ಮಾಡಲು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ.

ಮರುವಿಚಾರಣೆ ಇಲ್ಲ.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಸಾ.ಓ.ಹೇ.ಸ.ಒ**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆಎಂಎಫ್‌ಸಿ., ಶ್ರೀರಂಗಪಟ್ಟಣ.**